ಆಕಾಶವಾಣಿ 02.07.2024

ಪ್ರದೇಶ ಸಮಾಚಾರ

ಓದುತ್ತಿರುವವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ಅಸಮಾನತೆ ಹೋಗಲಾಡಿಸಿ, ಸಾಮಾಜಿಕ ಚೈತನ್ಯ ತುಂಬುವಲ್ಲಿ, ಗ್ಯಾರಂಟಿ ಯೋಜನೆಗಳು, ಸಕ್ಷಮ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ, 10 ದಿನಗಳಲ್ಲಿ ಕ್ರಿಯಾ ಯೋಜನೆ ರೂಪಿಸಲು, ಮಂಡಳಿ ನಿರ್ಧಾರ.
- ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ, ವೈರಾಣು ಸಂಶೋಧನಾ ಮತ್ತು ರೋಗ ನಿರ್ಣಯ ಪ್ರಯೋಗಾಲಯ ಸ್ಥಾಪಿಸಲು ಕೇಂದ್ರದ ಒಪ್ಪಿಗೆ.
- ಕೊಪ್ಪಳದ ಗವಿಮಠ, ನಾಡಿನ ಪ್ರತಿಭಾನ್ವಿತ ಬಡ ಮಕ್ಕಳಿಗೆ ಆಸರೆ – ದೊಡ್ಡನಗೌಡ ಪಾಟೀಲ.

<><><>

ಈಗ ವಾರ್ತೆಗಳ ವಿವರ

<><><>

ಸಿದ್ದು/ವಾಣಿಜ್ಯ ತೆರಿಗೆ

ರಾಜ್ಯದ ಪಂಚ ಖಾತ್ರಿ ಯೋಜನೆಗಳ ಅನುಷ್ಠಾನಕ್ಕೆ, 60 ಸಾವಿರ ಕೋಟಿ ರೂಪಾಯಿ ಅಗತ್ಯವಿದೆ; ಸಮಾಜದ ಅಸಮಾನತೆ ಹೋಗಲಾಡಿಸಲು, ಎಲ್ಲರಿಗೂ ಆರ್ಥಿಕ, ಸಾಮಾಜಿಕ ಚೈತನ್ಯ ತುಂಬುವ ಸದುದ್ದೇಶದಿಂದ, ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ, ವಾಣಿಜ್ಯ ತೆರಿಗೆ ಇಲಾಖೆ ಆಯೋಜಿಸಿದ್ದ, 'ಜಿ.ಎಸ್.ಟಿ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ, 65 ಜನ ಸಾಧಕರಿಗೆ ಮುಖ್ಯಮಂತ್ರಿಗಳ ಸೇವಾ ಪ್ರಶಸ್ತಿ ಪ್ರದಾನ ಮಾಡಿ, ಅವರು ಮಾತನಾಡಿದರು.

ಆರ್ಥಿಕವಾಗಿ ದುರ್ಬಲರಾದ ಎಲ್ಲ ಧರ್ಮಗಳ, ಎಲ್ಲ ಜಾತಿಗಳ ಬಡವರಿಗೆ, ಶಕ್ತಿ ತುಂಬಬೇಕಾದರೆ ಸಂಪನ್ಮೂಲ ಕ್ರೋಢೀಕರಣ ಅಗತ್ಯ. 2023-24 ನೇ ಸಾಲಿನಲ್ಲಿ 1 ಲಕ್ಷದ 45 ಸಾವಿರದ 266 ಕೋಟಿ ರೂಪಾಯಿ ತೆರಿಗೆ ಸಂಗ್ರಹಿಸಿ, ವಾಣಿಜ್ಯ ತೆರಿಗೆ ಇಲಾಖೆ ಉತ್ತಮ ಕೆಲಸ ಮಾಡಿದೆ ಎಂದು ಮುಖ್ಯಮಂತ್ರಿ ಶ್ಲಾಘಿಸಿದರು.

ಕೆ.ಕೆ.ಆರ್.ಡಿ.ಬಿ/ಅಜಯ್

ಪ್ರಸಕ್ತ 2024–25ನೇ ಸಾಲಿನ ಆಯವ್ಯಯದಲ್ಲಿ, ರಾಜ್ಯ ಸರ್ಕಾರ, ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಘೋಷಿಸಿರುವ, 5 ಸಾವಿರ ಕೋಟಿ ರೂಪಾಯಿ ಅನುದಾನಕ್ಕೆ, ಕ್ರಿಯಾ ಯೋಜನೆ ರೂಪಿಸಲು, ಮಂಡಳಿ ಸರ್ವಾನುಮತದಿಂದ ಅನುಮೋದಿಸಿದೆ.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾಕ್ಟರ್ ಅಜಯ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ, ಪ್ರಸಕ್ತ ವರ್ಷದ ಮೊದಲ ಮಂಡಳಿ ಸಭೆಯಲ್ಲಿ, ಆಯಾ ಕ್ಷೇತ್ರಗಳ ಶಾಸಕರು ಮುಂದಿನ 10 ದಿನದೊಳಗೆ ಮಂಡಳಿಗೆ ಪ್ರಸ್ತಾವ ಸಲ್ಲಿಸುವಂತೆ, ಸಭೆ ನಿರ್ಧರಿಸಿತು.

ಶಿಕ್ಷಣಕ್ಕೆ ಶೇಕಡ 25 ರಷ್ಟು ಅನುದಾನ ಮೀಸಲಿರಿಸುವುದು ಸೇರಿದಂತೆ, ಆರೋಗ್ಯ, ಉದ್ಯೋಗ ಸೃಜನೆ, ಕೌಶಲಾಭಿವೃದ್ಧಿ, ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಿ, ಮಾನವ ಅಭಿವೃದ್ಧಿ ಸೂಚ್ಯಂಕ ಉತ್ತಮಗೊಳಿಸಲು, ಸಭೆ ನಿರ್ಧರಿಸಿತು.

ಪರಮೇಶ್ವರ್/ಕಾಯ್ದೆ

ನೂತನವಾಗಿ ಜಾರಿಗೊಂಡ, ಮೂರು ಹೊಸ ಕಾನೂನುಗಳ ಸಮರ್ಪಕ ಅನುಷ್ಠಾನ ಖಾತ್ರಿ ಪಡಿಸಲು, ಪೊಲೀಸ್ ಅಧಿಕಾರಿಗಳಿಂದ, ಪೇದೆಗಳ ವರೆಗೆ, ಎಲ್ಲ ಸಿಬ್ಬಂದಿಗೆ ಸೂಕ್ತ ತರಬೇತಿ ನೀಡಲಾಗಿದೆ; ಪೊಲೀಸರಿಗಾಗಿ ವಿಶೇಷ ಆಪ್ ಸಹ ಸಿದ್ಧಪಡಿಸಲಾಗಿದೆ ಎಂದು, ಗೃಹ ಖಾತೆ ಸಚಿವ ಡಾಕ್ಟರ್ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಾಜ್ಯದಲ್ಲಿ ಸೋಮವಾರ ಜುಲೈ 1 ರಿಂದ, ದಾಖಲಾಗುವ ಎಲ್ಲ ದೂರುಗಳಿಗೆ ಹೊಸ ಕಾನೂನುಗಳು ಅನ್ವಯಿಸಲಿವೆ ಎಂದರು.

ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ, ಪತಿ–ಪತ್ನಿ ವರ್ಗಾವಣೆ ಬಗ್ಗೆ, ಶೀಘ್ರವೇ ಹೊಸ ನಿಯಮ ಜಾರಿಗೊಳ್ಳಲಿದೆ ಎಂದು, ಗೃಹ ಸಚಿವರು ಸ್ಪಷ್ಟ ಪಡಿಸಿದರು.

ಪತ್ರಿಕಾ/ದಿನಾಚರಣೆ

ಸುಳ್ಳು ಸುದ್ದಿಗಳು ಜಾಗ ಪಡೆಯದಂತೆ ಪತ್ರಿಕೆ, ಸಂಪಾದಕ ಮಂಡಳಿ ಹಾಗೂ ಮಾಧ್ಯಮ ಸಂಘಟನೆಗಳು ಗಂಭೀರವಾಗಿ ಯೋಚಿಸಬೇಕು; ಸಮಷ್ಟಿ ಹಿತ ಕಾಯಬೇಕು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಂಗಳೂರು ಪ್ರೆಸ್ ಕ್ಲಬ್, ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಯೋಜಿಸಿದ್ದ, ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು, ಮಾತನಾಡಿದರು.

ಸಾಮಾಜಿಕ ಮಾಧ್ಯಮಗಳ ಮೂಲಕ ಹರಡುವ ಸುಳ್ಳು ಸುದ್ದಿ, ಸಮಾಜಕ್ಕೆ ಅಪಾಯಕಾರಿ. ಸಮಾಜ ಮತ್ತು ಪತ್ರಕರ್ತರು ಬಹಳ ಎಚ್ಚರದಿಂದ ಇಂಥವನ್ನು ಗಮನಿಸಬೇಕು. ಸುಳ್ಳು ಸುದ್ದಿಗಳ ಮೇಲೆ ತೀವ್ರ ನಿಗಾ ಇಡಲು, ರಾಜ್ಯದ ಪ್ರತಿ ಜಿಲ್ಲೆಯಲ್ಲಿ, ವಿಶೇಷ ಘಟಕ ಸ್ಥಾಪಿಸಲಾಗಿದೆ ಎಂದು, ಮುಖ್ಯಮಂತ್ರಿ ನುಡಿದರು.

ಪತ್ರಿಕಾ ದಿನಾಚರಣೆ/ಜಿಲ್ಲಾವಾರು

ಪತ್ರಕರ್ತರು, ಜಿಲ್ಲಾಡಳಿತದ ಕಣ್ಣು ಮತ್ತು ಕಿವಿ ಇದ್ದಂತೆ ಎಂದು, ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಹೇಳಿದ್ದಾರೆ.

ವಿಜಯನಗರ ಜಿಲ್ಲೆ, ಕಾರ್ಯನಿರತ ಪತ್ರಕರ್ತರ ಸಂಘ, ಹೊಸಪೇಟೆಯಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆಯಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು.

ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಬಿ. ಸದಾಶಿವ ಪ್ರಭು ಅವರು ಮಾತನಾಡಿ, ಪತ್ರಿಕೋದ್ಯಮ ಪ್ರಜಾಪ್ರಭುತ್ವದ ಅವಿಭಾಜ್ಯ ಅಂಗ ಎಂದರು.

<><><>

ಸಿ.ಇ.ಓ. ಬಿ. ಸದಾಶಿವ ಪ್ರಭು ಧ್ವನಿ 28 ಸೆಕೆಂದುಗಳು

<><><>

ಪ್ರಲ್ಹಾದ/ಜೋಶಿ

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯ, ರಾಜ್ಯದ ಒಟ್ಟು 470 ಕಿಲೋ ಮೀಟರ್ ಉದ್ದದ ರಸ್ತೆ ಅಭಿವೃದ್ಧಿಗೆ, 8 ಸಾವಿರದ 6 ಕೋಟಿ ರೂಪಾಯಿ ಮಂಜೂರು ಮಾಡಿದೆ ಎಂದು, ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ನವಲಗುಂದ ಪಟ್ಟಣದ ಮೂಲಕ ಹಾಯ್ದು ಹೋಗುವ ರಾಷ್ಟ್ರೀಯ ಹೆದ್ದಾರಿ-52ಕ್ಕೆ 12 ಕಿಲೋ ಮೀಟರ್ ಉದ್ದದ ಬೈಪಾಸ್ ನಿರ್ಮಾಣಕ್ಕೆ, 350 ಕೋಟಿ ರೂಪಾಯಿ ಹಾಗೂ ಕುಸುಗಲ್‌ನಿಂದ ನರೇಂದ್ರ ಕ್ರಾಸ್ ವರೆಗಿನ ರಸ್ತೆ ಕಾಮಗಾರಿ ವಿಸ್ತೃತ ಯೋಜನಾ ವರದಿ ತಯಾರಿಸಲು 41 ಲಕ್ಷ ರೂಪಾಯಿ ತೆಗೆದಿರಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಜನನ/ಮರಣ

ಗ್ರಾಮ ಪಂಚಾಯಿತಿ ಕಾರ್ಯದರ್ಶಿಯನ್ನು ಜನನ, ಮರಣ ಉಪ ನೋಂದಣಾಧಿಕಾರಿಯನ್ನಾಗಿ ಸರ್ಕಾರ ನೇಮಕ ಮಾಡಿ, ಆದೇಶಿಸಿದೆ.

ಜುಲೈ 1 ರಿಂದ, ಗ್ರಾಮ ಪಂಚಾಯಿತಿಗಳಲ್ಲಿಯೇ ಜನನ, ಮರಣದ ನೋಂದಣಿ ಮಾಡಿಸಲು ಸಾಧ್ಯವಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಜನನ ಹಾಗೂ ಮರಣ ನೋಂದಣಿಯನ್ನು, 30 ದಿನದೊಳಗೆ ಪೂರ್ಣಗೊಳಿಸಲು ಅನುಕೂಲವಾಗಲಿದೆ.

ಜನನ-ಮರಣವನ್ನು, 21 ದಿನದೊಳಗೆ ನೋಂದಾಯಿಸಿದರೆ, ಪ್ರಮಾಣ ಪತ್ರವನ್ನು ಉಚಿತವಾಗಿ ವಿತರಿಸಲಾಗುತ್ತದೆ. 21 ದಿನಗಳ ನಂತರ 30 ದಿನಗಳೊಳಗೆ ನೋಂದಾಯಿಸಿದರೆ ಎರಡು ರೂಪಾಯಿ ಶುಲ್ಕ ವಿಧಿಸಲಾಗುವುದು ಎಂದು, ಪ್ರಕಟಣೆ ತಿಳಿಸಿದೆ.

ಗವಿಮಠ/ವಸತಿ ನಿಲಯ

ಕೊಪ್ಪಳದ, ಅಭಿನವ ಗವಿಸಿದ್ಧೇಶ್ವರ ಶ್ರೀಗಳು, ತಮ್ಮ ನಿಸ್ವಾರ್ಥ ಸೇವೆಯಿಂದ, ಅನ್ನ, ವಸ್ತ್ರ ಹಾಗೂ ವಸತಿ ದಯಪಾಲಿಸಿ, ಶಿಕ್ಷಣ ಮತ್ತು ಸಂಸ್ಕಾರ ನೀಡಿ, ಬಡ ಪ್ರತಿಭಾವಂತ ಮಕ್ಕಳ ಬಾಳು ಬೆಳಗುತ್ತಿದ್ದಾರೆ ಎಂದು, ವಿಧಾನಸಭೆಯಲ್ಲಿ ವಿಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ ಹೇಳಿದರು.

ಕೊಪ್ಪಳದ ಗವಿಮಠದಲ್ಲಿ ನೂತನವಾಗಿ ನಿರ್ಮಾಣಗೊಂಡ, 5 ಸಾವಿರ ವಿದ್ಯಾರ್ಥಿಗಳಿಗೆ ವಸತಿ ಮತ್ತು ಪ್ರಸಾದ ನಿಲಯದ, ಉದ್ಘಾಟನಾ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡು, ಅವರು ಮಾತನಾಡಿದರು.

ನಾಡಿನ ಮಕ್ಕಳಿಗೆ ಶಿಕ್ಷಣ, ಸಂಸ್ಕಾರ ಮತ್ತು ಉತ್ತಮ ಪ್ರಜೆಗಳನ್ನಾಗಿಸುವ ಮಹತ್ವದ ಕಾರ್ಯ ಗವಿಮಠದಿಂದ ನಡೆದಿದೆ ಎಂದು, ದೊಡ್ಡನಗೌಡರು ಶ್ಲಾಘಿಸಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹುಚ್ಚಮ್ಮ ಚೌಧರಿ, ಪದ್ಮಶ್ರೀ ಪುರಸ್ಕೃತ ಹಾಜಬ್ಬ ಮತ್ತು ಮುಂಡರಗಿಯ ಅನ್ನದಾನೇಶ್ವರ ಸ್ವಾಮೀಜಿ ಪಾಲ್ಗೊಂಡಿದ್ದರು.

ಖಿಲಾಫತ್/ದಿವ್ಯಾ ಪ್ರಭು

ಭಾರತದ ಸ್ವಾತಂತ್ರ್ಯ ಚಳವಳಿಯಲ್ಲಿ, ಧಾರವಾಡ ಜಿಲ್ಲೆಯ ಕೊಡುಗೆ ಅಪಾರ. ಅನೇಕ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ಸ್ವಾತಂತ್ರ್ಯ ಲಭಿಸಿತು ಎಂದು, ಜಿಲ್ಲಾಧಿಕಾರಿ ದಿವ್ಯಾ ಪ್ರಭು ಹೇಳಿದ್ದಾರೆ.

ಧಾರವಾಡದ ಜಕಣಿ ಬಾವಿ ಬಳಿ, ಖಿಲಾಫತ್ ಹೋರಾಟದಲ್ಲಿ ಹುತಾತ್ಮರಾದವರ ಸ್ಮಾರಕಕ್ಕೆ ಶ್ರದ್ಧಾಂಜಲಿ ಸಲ್ಲಿಸಿ, ಅವರು ಮಾತನಾಡಿದರು.

ಕಾರ್ಯಕ್ರಮದ ಸಂಯೋಜಕ ಉದಯ ಯಂಡಿಗೇರಿ ಅವರು ಮಾತನಾಡಿ, 1921 ಜುಲೈ 1 ರಂದು, ಸಾರಾಯಿ ವಿರೋಧಿ ಆಂದೋಲನದಲ್ಲಿ ಬ್ರಿಟಿಷರ ಗೋಲಿಬಾರಿಗೆ ಮೂವರು ಹುತಾತ್ಮರಾದರು. ಅವರ ತ್ಯಾಗವನ್ನು ಸ್ಮರಿಸಲು, ಈ ಸ್ಮಾರಕವನ್ನು ಕಾಪಾಡಲಾಗುತ್ತಿದೆ ಎಂದರು.

ಅನೇಕ ಗಣ್ಯರು ಹುತಾತ್ಮರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.

ಕಿಮ್ಸ್/ಕಮ್ಮಾರ್/ಹೊಸಮನಿ

ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ವೈರಾಣು ಸಂಶೋಧನಾ ಮತ್ತು ರೋಗ ನಿರ್ಣಯ ಪ್ರಯೋಗಾಲಯ– ಎನ್.ಸಿ.ಡಿ.ಸಿ. ಸ್ಥಾಪಿಸಲು ಕೇಂದ್ರ ಸರ್ಕಾರ ಒಪ್ಪಿಗೆ ಸೂಚಿಸಿದೆ.

ಕಿಮ್ಸ್ ಆವರಣದಲ್ಲಿ ಪ್ರಯೋಗಾಲಯದ ಸ್ಥಾಪನೆಗೆ 27 ಗುಂಟೆ ಜಾಗೆ ಒದಗಿಸಲಾಗಿದ್ದು, ಸಾಂಕ್ರಾಮಿಕ ರೋಗ ಪತ್ತೆ ಮತ್ತು ಅಧ್ಯಯನಕ್ಕೆ ಸಹಕಾರಿಯಾಗಲಿದೆ ಎಂದು ಕಿಮ್ಸ್ ಆಸ್ಪತ್ರೆಯ ಪ್ರಭಾರಿ ನಿರ್ದೇಶಕ ಡಾಕ್ಟರ್ ಎಸ್.ಎಫ್.ಕಮ್ಮಾರ್ ತಿಳಿಸಿದ್ದಾರೆ.

ಕಿಮ್ಸ್ ನೃಪತುಂಗ ಸಭಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಿಮ್ಸ್ ಪ್ರಾಚಾರ್ಯ ಡಾಕ್ಟರ್ ಈಶ್ವರ ಹೊಸಮನಿ, ಕಿಮ್ಸ್ ಆಸ್ಪತ್ರೆಯಲ್ಲಿ ಕಣ್ಣು ಮತ್ತು ಮೂತ್ರ ಜನಕಾಂಗ ಕಸಿ ಮಾಡಲು ಅವಕಾಶವಿದೆ. ಯಕೃತ್ತು ಕಸಿ

ಮಾಡಲು ಅವಕಾಶ ನೀಡುವಂತೆ, ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

<><><>

ಡಾಕ್ಟರ್ ಈಶ್ವರ ಹೊಸಮನಿ ಧ್ವನಿ 38 ಸೆಕೆಂದುಗಳು

<><><>

ತಿಮ್ಮಾಪೂರ/ನೀರಾವರಿ

ಜಮಖಂಡಿ ತಾಲೂಕಿನ, ಕುಲಹಳ್ಳಿ–ಹುನ್ನೂರ ಏತ ನೀರಾವರಿ ಯೋಜನೆಗೆ ಚಾಲನೆ ನೀಡಲಾಗಿದ್ದು, ರೈತರ ಅನುಕೂಲಕ್ಕಾಗಿ ಶೀಘ್ರ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದಾಗಿ, ಬಾಗಲಕೋಟೆ ಜಿಲ್ಲೆ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಬಕವಿ–ಬನಹಟ್ಟಿ ಮತ್ತು ಜಮಖಂಡಿ ತಾಲೂಕಿನ, 9 ಸಾವಿರದ ನೂರಾ 63 ಹೆಕ್ಟರ್ ಕೃಷಿ ಭೂಮಿಗೆ, ನೀರಾವರಿ ಸೌಲಭ್ಯ ನೀಡುವ ಉದ್ದೇಶದಿಂದ, ಮುಂಗಾರು ಹಂಗಾಮಿಗೆ ರೈತರಿಗೆ ಅನುಕೂಲವಾಗಲಿ ಎಂದು, ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಪ್ರಿಯಾಂಕ್/ಖರ್ಗೆ

ವನಮಹೋತ್ಸವ ದಿನಾಚರಣೆ ಹಿನ್ನೆಲೆ, ಚಿತ್ತಾಪೂರ ತಾಲೂಕಿನ ಮಾಡಬೂಳನಲ್ಲಿ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ, ಪ್ರಿಯಾಂಕ್ ಖರ್ಗೆ ಅವರು, ಪ್ರಾಣಿ ಸಂಗ್ರಹಾಲಯದಲ್ಲಿ ಸಸಿ ನೆಟ್ಟು ಚಾಲನೆ ನೀಡಿದರು.

ಅಂದಾಜು 50 ಕೋಟಿ ರೂಪಾಯಿ ವೆಚ್ಚದಲ್ಲಿ, 43 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ಪ್ರಾಣಿ ಸಂಗ್ರಹಾಲಯದ ಕಾಮಗಾರಿಯನ್ನು ಸಚಿವರು ವೀಕ್ಷಿಸಿದರು.

ಉಪ ವಲಯ ಅರಣ್ಯಾಧಿಕಾರಿ ಸುಮಿತ್ ಪಾಟೀಲ ಅವರು ಮಾತನಾಡಿ, ಹುಲಿ, ಸಿಂಹ ಸೇರಿದಂತೆ ಎಲ್ಲ ಪ್ರಾಣಿ, ಪಕ್ಷಿಗಳ ಸಂಗ್ರಹಾಲಯಕ್ಕೆ, ಪೂರಕ ವಾತಾವರಣ ನಿರ್ಮಿಸಲಾಗುತ್ತಿದೆ ಎಂದರು.

ಬಳಿಕ ಸಚಿವ ಪ್ರಿಯಾಂಕ್ ಖರ್ಗೆ, ಚಿತ್ತಾಪೂರ ತಾಲೂಕಿನ ನೂತನ ಕ್ರೀಡಾಂಗಣದ ನಿರ್ಮಾಣ ಹಂತದ ಕಾಮಗಾರಿ ಪರಿಶೀಲಿಸಿದರು.

ಜಾರ್ಜ್/ಸೌರ ಪಾರ್ಕ್

ತುಮಕೂರು ಜಿಲ್ಲೆ, ಪಾವಗಡದಂತೆಯೇ ಮಧುಗಿರಿಯಲ್ಲಿಯೂ ಬೃಹತ್ 'ಸೋಲಾರ್ ಪಾರ್ಕ್' ನಿರ್ಮಿಸಲು, ಸರ್ಕಾರ ನಿರ್ಧರಿಸಿದೆ ಎಂದು, ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್, ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, 'ಪಿ.ಎಂ. ಕುಸುಮ್ ಯೋಜನೆ' ಅಡಿ, ಮಧುಗಿರಿಯಲ್ಲಿ 735 ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದಿಸುವ, ಸೋಲಾರ್ ಪಾರ್ಕ್ ನಿರ್ಮಾಣಕ್ಕೆ, ಕೇಂದ್ರ ಸರ್ಕಾರದ ಏಜೆನ್ಸಿಯೊಂದಿಗೆ ಚರ್ಚಿಸಿದ್ದು, ಶೀಘ್ರ ಅನುಮೋದನೆ ದೊರೆಯುವ ನಿರೀಕ್ಷೆ ಇದೆ ಎಂದರು.

ನಿಧನ

ಹಿರಿಯ ಸಾಹಿತಿ, ಪ್ರೊಫೆಸರ್ ಎನ್.ಜಿ.ಪಟವರ್ಧನ್ ಉಜಿರೆಯ ಖಾಸಗಿ ಆಸ್ಪತ್ರೆಯಲ್ಲಿ ಸೋಮವಾರ ನಿಧನರಾದರು. ಅವರಿಗೆ 81 ವರ್ಷ ವಯಸ್ಸಾಗಿತ್ತು.

ಹಂಸಧ್ವನಿ ಪ್ರಕಾಶನದ ಮೂಲಕ ಮಹತ್ವದ ಕೃತಿಗಳನ್ನು ಪ್ರಕಟಿಸಿದ್ದ ಸಾಹಿತಿ ಪ್ರೊಫೆಸರ್ ಪಟವರ್ಧನ್, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ಮೂಲದವರು. ಇಂದು ಉಜಿರೆಯಲ್ಲಿ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಲಿದೆ.

ಈಗ ಸಂಕ್ಷಿಪ್ತ ಸುದ್ದಿಗಳು:

ಬೆಳಗಾವಿ – ಕಿತ್ತೂರು – ಧಾರವಾಡ ಮಧ್ಯೆ, ಹೊಸ ರೈಲು ಶೀಘ್ರ ಕಾರ್ಯಾರಂಭಿಸುವಂತೆ, ಕ್ರಮವಹಿಸಲು ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈ ್ಣವ ಅವರಿಗೆ, ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಹೊಸ ದಿಲ್ಲಿಯಲ್ಲಿ ಮನವಿ ಸಲ್ಲಿಸಿದ್ದಾರೆ.

ಭಾರತೀಯ ವಾಯುಪಡೆಯ, ಅಗ್ನಿಪಥ್ ಯೋಜನೆಯಡಿ, ಅಗ್ನಿವೀರ್ ವಾಯು ಸೇವೆಗಾಗಿ, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳ ಆಯ್ಕೆಗಾಗಿ, ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 8 ರಿಂದ 28ರ ವರೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಾಲತಾಣ – agnipathvayu.cdac.in ಭೇಟಿ ನೀಡಬಹುದು.

ಉತ್ತರಕನ್ನಡ ಜಿಲ್ಲೆ, ಯಲ್ಲಾಪುರದ ಅರಣ್ಯ ಸಭಾ ಭವನದಲ್ಲಿ, ಮಹಾತ್ಮ ಗಾಂಧಿ ನರೇಗಾ ಯೋಜನೆ ಸಮರ್ಪಕ ಅನು ್ಠಾನ ಕುರಿತ, ತರಬೇತಿ ಕಾರ್ಯಾಗಾರವನ್ನು, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹೆಚ್. ಎ. ಆನಂದ ಉದ್ಘಾಟಿಸಿದರು.

ಯಾದಗಿರಿ ಜಿಲ್ಲೆಯಾದ್ಯಂತ, ಲ್ಯಾಂಡ್ ಬೀಟ್ ಆಪ್‌ನಲ್ಲಿ ಸರ್ಕಾರಿ ಜಮೀನುಗಳ ಹದ್ದು ಮತ್ತು ಒತ್ತುವರಿ ಗುರುತಿಸಿ, ಅಪ್ಲೋಡ್ ಮಾಡಲಾಗುತ್ತಿದೆ ಎಂದು, ಜಿಲ್ಲಾಧಿಕಾರಿ ಬಿ. ಸುಶೀಲಾ ತಿಳಿಸಿದ್ದಾರೆ.

ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲೂಕುಗಳ ವ್ಯಾಪ್ತಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಸಿ.ಇ.ಓ.ಗಳಿಗೆ, ಒಂದು ದಿನದ ವಿಶೇ ್ ತರಬೇತಿ ಕಾರ್ಯಕ್ರಮವನ್ನು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್ ಉಲ್ಲಾ ್ರೀಫ್ ಉದ್ಘಾಟಿಸಿದರು.

ಅಂತಾರಾಷ್ಟ್ರೀಯ ಮಾದಕ ವಸ್ತು ಸೇವನೆ ಹಾಗೂ ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ ಅಂಗವಾಗಿ, ನಾಳೆ ಬೆಳಗ್ಗೆ 10:30ಕ್ಕೆ, ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ, ವಿಶೇಷ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಉತ್ತರಕನ್ನಡ ಜಿಲ್ಲೆಯ ಪ್ರವಾಸಿ ತಾಣಗಳಿಗೆ, ಪ್ರವಾಸಿ ಮಾರ್ಗದರ್ಶಿಗಳನ್ನು ನೇಮಕ ಮಾಡಲು, ಪಿಯುಸಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಂದ, ಅರ್ಜಿ ಆಹ್ವಾನಿಸಲಾಗಿದೆ. ಈ ತಿಂಗಳ 8ನೇ ತಾರೀಖು, ಪ್ರವಾಸೋದ್ಯಮ ಇಲಾಖೆ, ಉಪನಿರ್ದೇಶಕರಿಗೆ ಅರ್ಜಿ ಸಲ್ಲಿಸಲು ಕೊನೆ ದಿನ.

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

**ಅಸಮಾನತೆ ಹೋಗಲಾಡಿಸಿ, ಸಾಮಾಜಿಕ ಚೈತನ್ಯ ತುಂಬುವಲ್ಲಿ, ಗ್ಯಾರಂಟಿ ಯೋಜನೆಗಳು, ಸಕ್ಷಮ – ಮುಖ್ಯಮಂತ್ರಿ ಸಿದ್ದರಾಮಯ್ಯ.**

**ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ, 10 ದಿನಗಳಲ್ಲಿ ಕ್ರಿಯಾ ಯೋಜನೆ ರೂಪಿಸಲು, ಮಂಡಳಿ ನಿರ್ಧಾರ.**

**ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ, ವೈರಾಣು ಸಂಶೋಧನಾ ಮತ್ತು ರೋಗ ನಿರ್ಣಯ ಪ್ರಯೋಗಾಲಯ ಸ್ಥಾಪಿಸಲು ಕೇಂದ್ರದ ಒಪ್ಪಿಗೆ.**

**ಕೊಪ್ಪಳದ ಗವಿಮಠ, ನಾಡಿನ ಪ್ರತಿಭಾನ್ವಿತ ಬಡ ಮಕ್ಕಳಿಗೆ ಆಸರೆ – ದೊಡ್ಡನಗೌಡ ಪಾಟೀಲ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.**

<><><>